**National**
**Kannada**
**15.02.2026 19.35 hrs**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

<u>ಮುಖ್ಯಾಂಶಗಳು</u>

1. ನವದೆಹಲಿಯಲ್ಲಿ ನಾಳೆ ಭಾರತ ಎಐ ಇಂಪ್ಯಾಕ್ಟ್ ಶೃಂಗಸಭೆ ೨೦೨೬ ಅನ್ನು ಉದ್ಘಾಟಿಸಲಿರುವ ಪ್ರಧಾನಿ ನರೇಂದ್ರ ಮೋದಿ

2. ಅಂತಾರಾಷ್ಟ್ರೀಯ ವ್ಯಾಪಾರ ಒಪ್ಪಂದಗಳಲ್ಲಿ ರೈತರು, ಪಶುಪಾಲಕರು ಮತ್ತು ಮೀನುಗಾರರ ಹಿತಾಸಕ್ತಿಗಳನ್ನು ರಕ್ಷಿಸಲಾಗುವುದು: ಕೇಂದ್ರ ಸಚಿವ ಅಮಿತ್ ಶಾ.

3. ಉತ್ತರ ಮತ್ತು ದಕ್ಷಿಣ ಗಾಜಾ ಪಟ್ಟಿಯಲ್ಲಿ ಇಸ್ರೇಲ್ ವಾಯುದಾಳಿ: ೯ ಪ್ಯಾಲೆಸ್ತೀನಿಯನ್ನರ ಸಾವು

4. ಐಸಿಸಿ ಪುರುಷರ ವಿಶ್ವಕಪ್ ಟಿ-೨೦ ಕ್ರಿಕೆಟ್: ಪಾಕಿಸ್ತಾನದ ವಿರುದ್ಧ ಬ್ಯಾಟಿಂಗ್ ಮಾಡುತ್ತಿರುವ ಭಾರತ

<><><><>

ಭಾರತ ಎಐ ಇಂಪ್ಯಾಕ್ಟ್ ಶೃಂಗಸಭೆ ೨೦೨೬ ಅನ್ನು ನವದೆಹಲಿಯಲ್ಲಿ ನಾಳೆ ಪ್ರಧಾನಮಂತ್ರಿ ನರೇಂದ್ರ ಮೋದಿ ಉದ್ಘಾಟಿಸಲಿದ್ದಾರೆ. ಐದು ದಿನಗಳ ಈ ಶೃಂಗಸಭೆಯು ಭಾರತ ಎಐ ಇಂಪ್ಯಾಕ್ಟ್ ಶೃಂಗಸಭೆ ೨೦೨೬ರ ಜೊತೆಗೆ ನಡೆಯಲಿದ್ದು, ಕೃತಕ ಬುದ್ಧಿಮತ್ತೆಯ ರಾಷ್ಟ್ರೀಯ ಪ್ರದರ್ಶನವಾಗಿ ಇದು ಕಾರ್ಯನಿರ್ವಹಿಸಲಿದೆ. ಆಸ್ಟ್ರೇಲಿಯಾ, ಜಪಾನ್, ರಷ್ಯಾ, ಯುನೈಟೆಡ್ ಕಿಂಗ್‌ಡಮ್, ಫ್ರಾನ್ಸ್ ಸೇರಿದಂತೆ ೧೩ ದೇಶಗಳ ಮಂಟಪಗಳನ್ನು ಇದು ಒಳಗೊಂಡಿರಲಿದೆ. ೩೦೦ಕ್ಕೂ ಹೆಚ್ಚು ಕ್ಯುರೇಟೆಡ್ ಪ್ರದರ್ಶನ ಮಂಟಪಗಳು ಮತ್ತು ನೇರ ಪ್ರದರ್ಶನಗಳನ್ನು ಶೃಂಗಸಭೆ ಆಯೋಜಿಸುತ್ತದೆ. ಎಐ ಪರಿಸರ ವ್ಯವಸ್ಥೆಯಲ್ಲಿ ಅಂತಾರಾಷ್ಟ್ರೀಯ ಸಹಯೋಗವನ್ನು ಈ ಶೃಂಗಸಭೆ ಪ್ರದರ್ಶಿಸುತ್ತದೆ.

<><><><>

ಎಲೆಕ್ಟ್ರಾನಿಕ್ಸ್ ಮತ್ತು ಮಾಹಿತಿ ತಂತ್ರಜ್ಞಾನ ಸಚಿವಾಲಯವು ಇಂಟೆಲ್ ಇಂಡಿಯಾ ಸಹಯೋಗದೊಂದಿಗೆ, ನೈತಿಕ, ಅಂತರ್ಗತ ಮತ್ತು ಜವಾಬ್ದಾರಿಯುತ ಕೃತಕಬುದ್ಧಿಮತ್ತೆ ಬಳಕೆಯನ್ನು ಉತ್ತೇಜಿಸುವ ಡಿಜಿಟಲ್ ಅಭಿಯಾನಕ್ಕೆ ದೇಶಾದ್ಯಂತದ ನಾಳೆ ಚಾಲನೆ ನೀಡಲಿದೆ. ಈ ಉಪಕ್ರಮದ ಮೂಲಕ, ೨೪ ಗಂಟೆಗಳಲ್ಲಿ 'ಕೃತಕ ಬುದ್ಧಿಮತ್ತೆಯ ಅಭಿಯಾನಕ್ಕಾಗಿ ಸ್ವೀಕರಿಸಲಾದ ಅತಿ ಹೆಚ್ಚು ಪ್ರತಿಜ್ಞೆಗಳು' ಎಂಬ ಅಧಿಕೃತ ಗಿನ್ನೆಸ್ ವಿಶ್ವ ದಾಖಲೆ ನಿರ್ಮಿಸಲು ಪ್ರಯತ್ನಿಸಲಾಗುವುದು ಎಂದು ಸಚಿವಾಲಯವು ಪ್ರಕಟಣೆಯಲ್ಲಿ ತಿಳಿಸಿದೆ. ಇಂಡಿಯಾ ಎಐ ಮಿಷನ್ ಅಡಿಯಲ್ಲಿ ನಡೆಯುವ ಈ ಅಭಿಯಾನವು ವಿಶ್ವಾಸಾರ್ಹ ಮತ್ತು ಮಾನವ-ಕೇಂದ್ರಿತ ಕೃತಕ-

ಬುದ್ಧಿಮತ್ತೆ ಪರಿಸರ ವ್ಯವಸ್ಥೆಯನ್ನು ನಿರ್ಮಿಸುವ ಭಾರತದ ಬದ್ಧತೆಯನ್ನು ಬಲಪಡಿಸುವ ಗುರಿಯನ್ನು ಹೊಂದಿದೆ. ಈ ಉಪಕ್ರಮವು ಸನ್ನಿವೇಶ ಆಧಾರಿತ ಪ್ರಶ್ನೆಗಳನ್ನು ಒಳಗೊಂಡಿದ್ದು, ಭಾಗವಹಿಸುವವರು, ಔಪಚಾರಿಕ ಪ್ರತಿಜ್ಞೆ ತೆಗೆದುಕೊಳ್ಳುವ ಮೊದಲು ಜವಾಬ್ದಾರಿಯುತ ಕೃತಕ ಬುದ್ಧಿಮತ್ತೆ ಅಭ್ಯಾಸಗಳ ಬಗ್ಗೆ ಚಿಂತಿಸಲು ಪ್ರೇರೇಪಿಸುತ್ತದೆ.

<><><><>

ರೈತರು, ಪಶುಪಾಲಕರು ಮತ್ತು ಮೀನುಗಾರರ ಹಿತಾಸಕ್ತಿಗಳನ್ನು ಭಾರತದ ಎಲ್ಲಾ ಅಂತಾರಾಷ್ಟ್ರೀಯ ವ್ಯಾಪಾರ ಒಪ್ಪಂದಗಳಲ್ಲಿ ರಕ್ಷಿಸುವ ನರೇಂದ್ರ ಮೋದಿ ಸರ್ಕಾರದ ಬದ್ಧತೆಯನ್ನು ಕೇಂದ್ರ ಗೃಹ ಸಚಿವ ಅಮಿತ್ ಶಾ ಪುನರುಚ್ಚರಿಸಿದ್ದಾರೆ. ಗುಜರಾತ್‌ನ ಗಾಂಧಿನಗರದ ಮಹಾತ್ಮಾ ಮಂದಿರದಲ್ಲಿ ಇಂದು ದೇಶದ ಮೊದಲ ಕೇಂದ್ರ ಬ್ಯಾಂಕ್ ಡಿಜಿಟಲ್ ಕರೆನ್ಸಿ ಆಧಾರಿತ ಸಾರ್ವಜನಿಕ ವಿತರಣಾ ವ್ಯವಸ್ಥೆಗೆ ಚಾಲನೆ ನೀಡಿ ಮಾತನಾಡಿದ ಅವರು, ಭಾರತ-ಅಮೆರಿಕ ವ್ಯಾಪಾರ ಒಪ್ಪಂದ ಮತ್ತು ಭಾರತ-ಯುರೋಪಿಯನ್ ಒಕ್ಕೂಟದ ಮುಕ್ತ ವ್ಯಾಪಾರ ಒಪ್ಪಂದಗಳೆರಡರಲ್ಲೂ ರೈತರು ಮತ್ತು ಪಶುಪಾಲಕರ ಹಿತಾಸಕ್ತಿಗಳನ್ನು ಕಾಪಾಡಲಾಗಿದೆ ಎಂದು ಹೇಳುವ ಮೂಲಕ ವಿರೋಧ ಪಕ್ಷದ ಆರೋಪಗಳನ್ನು ತಳ್ಳಿಹಾಕಿದರು. ಹೊಸ ಡಿಜಿಟಲ್ ಟೋಕನ್ ಆಧಾರಿತ ವಿತರಣಾ ವ್ಯವಸ್ಥೆಯು ಸಾರ್ವಜನಿಕ ವಿತರಣಾ ವ್ಯವಸ್ಥೆಯಲ್ಲಿನ ಭ್ರಷ್ಟಾಚಾರವನ್ನು ನಿರ್ಮೂಲನೆ ಮಾಡುತ್ತದೆ ಮತ್ತು ವಿತರಣಾ ಪ್ರಕ್ರಿಯೆಯಲ್ಲಿ ಅಗತ್ಯವಿರುವ ಪಾರದರ್ಶಕತೆಯನ್ನು ತರುತ್ತದೆ ಎಂದು ಸಚಿವರು ವಿಶ್ವಾಸ ವ್ಯಕ್ತಪಡಿಸಿದರು.

ಧ್ವನಿ : ಅಮಿತ್ ಶಾ, ಕೇಂದ್ರ ಗೃಹ ಸಚಿವ (೩೦ ಸೆಕೆಂಡ್ಸ್)

ಕಳೆದ ದಶಕದಲ್ಲಿ ಸರ್ಕಾರ ಬಡವರ ಪರವಾಗಿ ಕೈಗೊಂಡ ಉಪಕ್ರಮಗಳನ್ನು ನೆನೆದ ಅವರು, ಇವುಗಳ ನೆರವಿನಿಂದ ೨೭ ಕೋಟಿ ಜನರು ಯಶಸ್ವಿಯಾಗಿ ಬಡತನ ರೇಖೆಯನ್ನು ದಾಟಿದ್ದಾರೆ ಎಂದು ಗಮನಸೆಳೆದರು. ಈ ವ್ಯವಸ್ಥೆಯು ಫಲಾನುಭವಿಗಳಿಗೆ ವಸ್ತುವಿನ ಹೆಸರು, ಪ್ರಮಾಣ ಮತ್ತು ಬೆಲೆಯ ವಿವರಗಳನ್ನು ಒಳಗೊಂಡಿರುವ ಡಿಜಿಟಲ್ ವಾಲೆಟ್ ಟೋಕನ್‌ಗಳನ್ನು ಒದಗಿಸುತ್ತದೆ. ಈ ಸಂದರ್ಭದಲ್ಲಿ ಮಾತನಾಡಿದ ಕೇಂದ್ರ ಗ್ರಾಹಕ ವ್ಯವಹಾರಗಳು, ಆಹಾರ ಮತ್ತು ಸಾರ್ವಜನಿಕ ವಿತರಣಾ ಸಚಿವ ಪ್ರಹ್ಲಾದ್ ಜೋಶಿ, ಈ ಉಪಕ್ರಮವನ್ನು ಶೀಘ್ರದಲ್ಲೇ ಚಂಡೀಗಢ, ಪುದುಚೇರಿ ದಾದ್ರಾ ಮತ್ತು ನಗರ ಹವೇಲಿಯಂತಹ ಕೇಂದ್ರಾಡಳಿತ ಪ್ರದೇಶಗಳಿಗೆ ವಿಸ್ತರಿಸಲಾಗುವುದು ಎಂದು ಘೋಷಿಸಿದರು.

<><><><>

ಉತ್ತರ ಮತ್ತು ದಕ್ಷಿಣ ಗಾಜಾ ಪಟ್ಟಿಯಲ್ಲಿ ಇಸ್ರೇಲ್ ಇಂದು ನಡೆಸಿದ ವಾಯುದಾಳಿಗಳ ನಂತರ ೯ ಪ್ಯಾಲೆಸ್ಟೀನಿಯನ್ನರು ಸಾವನ್ನಪ್ಪಿದ್ದಾರೆ. ಕದನ ವಿರಾಮ ಉಲ್ಲಂಘಿಸಿದ ಹಮಾಸ್ ದಾಳಿಗೆ ಪ್ರತಿಯಾಗಿ ಈ ದಾಳಿಗಳು ನಡೆದಿವೆ ಎಂದು ಇಸ್ರೇಲ್ ಸೇನೆ ತಿಳಿಸಿದೆ. ಪ್ಯಾಲೆಸ್ತೀನ್ ನಾಗರಿಕ ರಕ್ಷಣಾ ಮತ್ತು ಆರೋಗ್ಯ ಅಧಿಕಾರಿಗಳ ಪ್ರಕಾರ, ನಿರಾಶ್ರಿತ ಕುಟುಂಬಗಳನ್ನು ಹೊಂದಿರುವ ಟೆಂಟ್ ಶಿಬಿರದ ಮೇಲೆ ಇಸ್ರೇಲ್ ನಡೆಸಿದ ವೈಮಾನಿಕ ದಾಳಿಯಲ್ಲಿ ನಾಲ್ಕು ಜನರು ಸಾವನ್ನಪ್ಪಿದ್ದಾರೆ. ಖಾನ್ ಯೂನಿಸ್‌ನಲ್ಲಿ ನಡೆದ ಮತ್ತೊಂದು ದಾಳಿಯಲ್ಲಿ ಐದು ಜನರು ಸಾವನ್ನಪ್ಪಿದ್ದಾರೆ. ಗಾಜಾ ಯುದ್ಧವನ್ನು ಕೊನೆಗೊಳಿಸುವ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಯೋಜನೆಯ ಪ್ರಮುಖ ಅಂಶವಾದ ಕದನ ವಿರಾಮ ಒಪ್ಪಂದವನ್ನು ಇಸ್ರೇಲ್ ಮತ್ತು ಹಮಾಸ್ ಉಲ್ಲಂಘಿಸಿವೆ.

<><><><>

ಇದೇ ೧೭ ರಂದು ಢಾಕಾದಲ್ಲಿ ನಡೆಯಲಿರುವ ಬಾಂಗ್ಲಾದೇಶ ರಾಷ್ಟ್ರೀಯತಾವಾದಿ ಪಕ್ಷದ ಅಧ್ಯಕ್ಷ ತಾರಿಕ್ ರೆಹಮಾನ್ ನೇತೃತ್ವದ ಬಾಂಗ್ಲಾದೇಶದ ನೂತನ ಸರ್ಕಾರದ ಪ್ರಮಾಣವಚನ ಸಮಾರಂಭದಲ್ಲಿ ಲೋಕಸಭಾಧ್ಯಕ್ಷ ಓಂ ಬಿರ್ಲಾ ಭಾರತವನ್ನು ಪ್ರತಿನಿಧಿಸಲಿದ್ದಾರೆ. ಇಂತಹ ಮಹತ್ವದ ಕಾರ್ಯಕ್ರಮದಲ್ಲಿ ಭಾರತದ ಲೋಕಸಭಾಧ್ಯಕ್ಷರು ಭಾಗವಹಿಸುವುದು ಭಾರತ ಮತ್ತು ಬಾಂಗ್ಲಾದೇಶದ ಜನರ ನಡುವಿನ ಆಳವಾದ ಸ್ನೇಹವನ್ನು ಬಿಂಬಿಸುತ್ತದೆ ಎಂದು ವಿದೇಶಾಂಗ ಸಚಿವಾಲಯ ಹೇಳಿಕೆಯಲ್ಲಿ ತಿಳಿಸಿದೆ. ಇದು ಎರಡು ರಾಷ್ಟ್ರಗಳನ್ನು ಒಗ್ಗೂಡಿಸುವ ಪ್ರಜಾಪ್ರಭುತ್ವದ ಮೌಲ್ಯಗಳಿಗೆ ಭಾರತದ ದೃಢವಾದ ಬದ್ಧತೆಯನ್ನು ಪುನರುಚ್ಚರಿಸುತ್ತದೆ ಎಂದು ಸಚಿವಾಲಯ ಹೇಳಿದೆ.

<><><><>

ಇದೇ ೧೭ರಂದು ಬೆಂಗಳೂರಿನಲ್ಲಿ ನಡೆಯಲಿರುವ ೬ನೇ ಭಾರತ-ಫ್ರಾನ್ಸ್ ವಾರ್ಷಿಕ ರಕ್ಷಣಾ ಸಂವಾದದ ಸಹ-ಅಧ್ಯಕ್ಷತೆಯನ್ನು ಫ್ರಾನ್ಸ್ ರಕ್ಷಣಾ ಸಚಿವ ಕ್ಯಾಥರಿನ್ ವೌಟ್ರಿನ್ ಅವರೊಂದಿಗೆ ಕೇಂದ್ರ ರಕ್ಷಣಾ ಸಚಿವ ರಾಜನಾಥ್ ಸಿಂಗ್ ವಹಿಸಲಿದ್ದಾರೆ. ಈ ಸಭೆಯು ಉಭಯ ದೇಶಗಳ ನಡುವಿನ ರಕ್ಷಣಾ ಸಹಕಾರದ ಸಂಪೂರ್ಣ ವ್ಯಾಪ್ತಿಯನ್ನು ಪರಿಶೀಲಿಸಲಿದೆ ಮತ್ತು ಕೈಗಾರಿಕಾ ಸಹಯೋಗವನ್ನು ವಿಸ್ತರಿಸುವತ್ತ ಗಮನ ಹರಿಸಲಿದೆ. ಇದು ರಕ್ಷಣಾ ಸಹಕಾರ ಒಪ್ಪಂದವನ್ನು ಮುಂದಿನ ೧೦ ವರ್ಷಗಳ ಕಾಲ ನವೀಕರಿಸುವ ನಿರೀಕ್ಷೆಯಿದೆ ಎಂದು ರಕ್ಷಣಾ ಸಚಿವಾಲಯ ತಿಳಿಸಿದೆ. ಈ ವೇಳೆ 'ಹ್ಯಾಮರ್' ಕ್ಷಿಪಣಿಗಳ ತಯಾರಿಕೆಗಾಗಿ ಜಂಟಿ ಉದ್ಯಮದ ಕುರಿತು ತಿಳುವಳಿಕೆ ಪತ್ರಕ್ಕೆ ಸಹಿ ಹಾಕುವ ಸಾಧ್ಯತೆಯಿದೆ. ಭಾರತೀಯ ಸೇನೆ ಮತ್ತು ಫ್ರಾನ್ಸ್ ಭೂಸೇನೆಗಳಲ್ಲಿ ಅಧಿಕಾರಿಗಳ ಪರಸ್ಪರ ನಿಯೋಜನೆಯ ಬಗ್ಗೆ ಘೋಷಣೆ ಹೊರಬೀಳುವ ನಿರೀಕ್ಷೆಯಿದೆ ಎಂದು ಸಚಿವಾಲಯ ತಿಳಿಸಿದೆ. ಇದೇ ವೇಳೆ ಕರ್ನಾಟಕದ ವೇಮಗಲ್‌ನಲ್ಲಿ ಟಾಟಾ

ಏರ್‌ಬಸ್‌ನ ಹೆಚ್-೧೨೫ ಲಘು ಹೆಲಿಕಾಪ್ಟರ್ ಅನ್ನು ಪ್ರಧಾನಿ ನರೇಂದ್ರ ಮೋದಿ ಮತ್ತು ಫ್ರಾನ್ಸ್ ಅಧ್ಯಕ್ಷ ಎಮ್ಯಾನುಯೆಲ್ ಮ್ಯಾಕ್ರನ್ ವರ್ಚುವಲ್ ಮೂಲಕ ಉದ್ಘಾಟಿಸಲಿದ್ದಾರೆ.

<><><>

ಕೊಲಂಬೊದ ಆರ್ ಪ್ರೇಮದಾಸ ಕ್ರೀಡಾಂಗಣದಲ್ಲಿ ಇಂದು ನಡೆಯುತ್ತಿರುವ ಐಸಿಸಿ ಪುರುಷರ ಟಿ-೨೦ ವಿಶ್ವಕಪ್ ಕ್ರಿಕೆಟ್‌ನಲ್ಲಿ, ಎ ಗುಂಪಿನ ಇಂದಿನ ಪಂದ್ಯದಲ್ಲಿ ಭಾರತ ಪಾಕಿಸ್ತಾನ ತಂಡಗಳು ಮುಖಾಮುಖಿಯಾಗಿವೆ. ಟಾಸ್ ಗೆದ್ದ ಪಾಕಿಸ್ತಾನ ತಂಡ ಫೀಲ್ಡಿಂಗ್ ಆಯ್ದುಕೊಂಡಿದೆ. ಇತ್ತೀಚಿನ ವರದಿಯಂತೆ ಮೊದಲು ಬ್ಯಾಟಿಂಗ್ ಮಾಡುತ್ತಿರುವ ಭಾರತ ೮ ಓವರ್‌ಗಳಲ್ಲಿ ೧ ವಿಕೆಟ್ ನಷ್ಟಕ್ಕೆ ೮೨ ರನ್ ಗಳಿಸಿ ಆಡುತ್ತಿದೆ. ಎರಡೂ ತಂಡಗಳು ತಮ್ಮ ಮೊದಲ ಎರಡು ಪಂದ್ಯಗಳನ್ನು ಗೆದ್ದಿದ್ದು, ತಲಾ ನಾಲ್ಕು ಅಂಕಗಳೊಂದಿಗೆ ಸಮಬಲ ಸಾಧಿಸಿದೆ. ಸೆಮಿಫೈನಲ್‌ನಲ್ಲಿ ಸ್ಥಾನ ಪಡೆಯುವ ಸ್ಪರ್ಧೆಯಲ್ಲಿ ಇಂದಿನ ಪಂದ್ಯ ಉಭಯ ತಂಡಗಳಿಗೆ ನಿರ್ಣಾಯಕವಾಗಿದೆ. ಮುಂಬೈನ ವಾಂಖೆಡೆ ಕ್ರೀಡಾಂಗಣದಲ್ಲಿ ನಡೆದ ಪಂದ್ಯಾವಳಿಯ ಇಂದಿನ ಮೊದಲ ಪಂದ್ಯದಲ್ಲಿ ನೇಪಾಳದ ವಿರುದ್ಧ ವೆಸ್ಟ್ ಇಂಡೀಸ್ ೬ ವಿಕೆಟ್‌ಗಳಿಂದ ಜಯ ಗಳಿಸಿದೆ. ಚೆನ್ನೈನ ಎಂ.ಎ ಚಿದಂಬರಂ ಕ್ರೀಡಾಂಗಣದಲ್ಲಿ ನಡೆದ ಮತ್ತೊಂದು ಪಂದ್ಯದಲ್ಲಿ ನಮೀಬಿಯಾ ವಿರುದ್ಧ ಯು.ಎಸ್.ಎ ತಂಡ ೩೧ ರನ್ ಗಳಿಂದ ವಿಜಯ ಸಾಧಿಸಿದೆ.

<><><>

ಜರ್ಮನಿಯಲ್ಲಿ ಮ್ಯೂನಿಚ್ ಭದ್ರತಾ ಸಮ್ಮೇಳನದ ಅಧ್ಯಕ್ಷ ವೋಲ್ಫ್‌ಗ್ಯಾಂಗ್ ಇಶಿಂಗರ್ ಅವರೊಂದಿಗೆ ವಿದೇಶಾಂಗ ಸಚಿವ ಡಾ.ಎಸ್.ಜೈಶಂಕರ್ ಇಂದು ಸಂವಾದ ನಡೆಸಿದ್ದಾರೆ. ಭದ್ರತೆಯೆಡೆಗಿನ ಅಭಿಪ್ರಾಯಗಳನ್ನು ಪ್ರಸ್ತುತಪಡಿಸಲು ಮತ್ತು ದೃಷ್ಟಿಕೋನಗಳನ್ನು ವಿನಿಮಯ ಮಾಡಿಕೊಳ್ಳಲು ಮ್ಯೂನಿಚ್ ಭದ್ರತಾ ಸಮ್ಮೇಳನ ೨೦೨೬ ಉತ್ತಮ ಅವಕಾಶವನ್ನು ಒದಗಿಸಿದೆ ಎಂದು ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ, ಡಾ. ಜೈಶಂಕರ್ ಹೇಳಿದ್ದಾರೆ. ಅವರು ಸಮ್ಮೇಳನದ ಹೊರತಾಗಿ ತಮ್ಮ ರೊಮೇನಿಯನ್ ಪ್ರತಿರೂಪಿ ಓನಾ-ಸಿಲ್ವಿಯಾ ಟೋಯಿಯು ಅವರನ್ನು ಡಾ. ಜೈಶಂಕರ್ ಭೇಟಿಯಾದರು. ಇಬ್ಬರೂ ಸಚಿವರು ಭಾರತ-ರೊಮೇನಿಯಾ ದ್ವಿಪಕ್ಷೀಯ ಸಂಬಂಧಗಳನ್ನು ಪರಿಶೀಲಿಸಿ, ಅದರ ಸಾಮರ್ಥ್ಯವನ್ನು ಹೆಚ್ಚು ಸಂಪೂರ್ಣವಾಗಿ ಅರಿತುಕೊಳ್ಳಲು ಒಪ್ಪಿಗೆ ಸೂಚಿಸಿದ್ದಾರೆ.

<><><>

ಆಸ್ಟ್ರೇಲಿಯಾದ ಸಿಡ್ನಿಯಲ್ಲಿ ನಡೆದ ಮೂರು ಪಂದ್ಯಗಳ ಮಹಿಳಾ ಟಿ-೨೦ ಅಂತಾರಾಷ್ಟ್ರೀಯ ಕ್ರಿಕೆಟ್ ಸರಣಿಯ ಮೊದಲ ಪಂದ್ಯದಲ್ಲಿ ಭಾರತ ತಂಡವು ಡಕ್‌ವರ್ತ್-ಲೂಯಿಸ್ ನಿಯಮದಡಿಯಲ್ಲಿ ಆತಿಥೇಯ ಆಸ್ಟ್ರೇಲಿಯಾ ತಂಡವನ್ನು ೯ ವಿಕೆಟ್‌ಗಳಿಂದ ಸೋಲಿಸಿದೆ. ಮೊದಲು ಬ್ಯಾಟಿಂಗ್ ಮಾಡಿದ ಆಸ್ಟ್ರೇಲಿಯಾ ೧೮ ಓವರ್‌ಗಳಲ್ಲಿ ೧೩೩ ರನ್‌ಗಳಿಗೆ ಆಲೌಟ್ ಆಯಿತು. ಇದಕ್ಕೆ ಉತ್ತರವಾಗಿ, ಮಳೆಯಿಂದ ಆಟ ನಿಂತಾಗ ಭಾರತ ೫.೧ ಓವರ್‌ಗಳಲ್ಲಿ ೧ ವಿಕೆಟ್‌ಗೆ ೫೦ ರನ್‌ಗಳಿಸಿತ್ತು. ಡಕ್‌ವರ್ತ್-ಲೂಯಿಸ್ ಪಾರ್ ಸ್ಕೋರ್ ೨೯ಕ್ಕಿಂತ ಮುಂದಿದ್ದ ಭಾರತವನ್ನು, ವಿಜೇತ ಎಂದು ಘೋಷಿಸಲಾಯಿತು.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>